**ಕರ್ನಾಟಕ ವಿಧಾನ ಪರಿಷತ್ತು**

ಸಂಖ್ಯೆ:ಕವಿಪ/ಆ-1/52/ಸು/2023

ವಿಧಾನ ಪರಿಷತ್ತಿನ ಸಚಿವಾಲಯ,
ಅಂಚೆ ಪೆಟ್ಟಿಗೆ ಸಂಖ್ಯೆ:5079, ವಿಧಾನ ಸೌಧ,
ಬೆಂಗಳೂರು-560001, **ದಿನಾಂಕ:19.03.2024**

**ಸುತ್ತೋಲೆ**

ವಿಷಯ: ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆಯ ಕಾರ್ಯಕ್ರಮದಲ್ಲಿ ಭಾಗವಹಿಸುವ ಬಗ್ಗೆ.

ಉಲ್ಲೇಖ: 1. ಕರ್ನಾಟಕ ಸರ್ಕಾರದ ಸುತ್ತೋಲೆ ಸಂ:ಸಿಆಸುಇ(ಆಸು):72:ಸ್ಸೇಮರ:2024. ದಿನಾಂಕ:18.03.2024.

2. ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಾಮ ನಿರ್ದೇಶಿತ ರಾಜ್ಯ ಪರಿಷತ್ ಸದಸ್ಯರು, ಇವರ ಪತ್ರ ದಿ:18.03.2024.

* * *

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ ಹಾಗೂ ಕರ್ನಾಟಕ ಸರ್ಕಾರ ಸಚಿವಾಲಯ ನೌಕರರ ಸಂಘದ ಸಹಯೋಗದಲ್ಲಿ ದಿನಾಂಕ:19.03.2024 ರಂದು ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಆವರಣ, ಕಬ್ಬನ್ ಉದ್ಯಾನವನ, ಬೆಂಗಳೂರು, ಇಲ್ಲಿ **"ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ"** ಕಾರ್ಯಕ್ರಮವನ್ನು ಆಯೋಜಿಸಿದ್ದು, ಸದರಿ ಕಾರ್ಯಕ್ರಮದಲ್ಲಿ ಭಾಗವಹಿಸಲು ಕರ್ನಾಟಕ ವಿಧಾನ ಪರಿಷತ್ತಿನ ಸಚಿವಾಲಯದ ಮಹಿಳಾ ಅಧಿಕಾರಿ/ನೌಕರರುಗಳಿಗೆ ಒಂದು ದಿನದ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಬೇಕೆಂದು ಉಲ್ಲೇಖಿತ ಪತ್ರ (2)ರಲ್ಲಿ ಕೋರಿರುತ್ತಾರೆ.

ಆದುದರಿಂದ, ದಿನಾಂಕ:19.03.2024 ರಂದು ಆಯೋಜಿಸಿರುವ **"ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ"** ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ತಿನ ಸಚಿವಾಲಯದ ಮಹಿಳಾ ಅಧಿಕಾರಿ/ನೌಕರರುಗಳು ಈ ಸೌಲಭ್ಯವನ್ನು ಪಡೆಯಲು ರಜೆಯನ್ನು ಮಂಜೂರು ಮಾಡುವ ಸಕ್ಷಮ ಅಧಿಕಾರಿಯಿಂದ ಮುಂಚಿತವಾಗಿ ರಜೆಯನ್ನು ಪಡೆಯತಕ್ಕದ್ದು ಹಾಗೂ ಕಾರ್ಯಕ್ರಮದಲ್ಲಿ ಹಾಜರಾಗಿರುವ ಬಗ್ಗೆ ನೌಕರರ ಸಂಘದಿಂದ ಪಡೆದ ಅಧಿಕೃತ ಹಾಜರಾತಿ ಪ್ರಮಾಣ ಪತ್ರವನ್ನು ಸಲ್ಲಿಸುವ ಷರತ್ತಿಗೊಳಪಟ್ಟು ಒಂದು ದಿನದ ವಿಶೇಷ ಸಾಂದರ್ಭಿಕ ರಜೆಯನ್ನು ಮಂಜೂರು ಮಾಡಲಾಗಿದೆ.

Anasuya 19/3/2024
**(ಅನಸೂಯಮ್ಮ)**
ಅಧೀನ ಕಾರ್ಯದರ್ಶಿ,
ಕರ್ನಾಟಕ ವಿಧಾನ ಪರಿಷತ್ತು.

**ಗೆ:**

ಕರ್ನಾಟಕ ವಿಧಾನ ಪರಿಷತ್ತಿನ ಎಲ್ಲಾ ಅಧಿಕಾರಿ/ನೌಕರರುಗಳಿಗೆ (ಶಾಸಕರ ಭವನವು ಸೇರಿದಂತೆ)

**ಪ್ರತಿಗಳು:**

1. ಮಾನ್ಯ ಸಭಾಪತಿಯವರ ಆಪ್ತ ಕಾರ್ಯದರ್ಶಿಯವರಿಗೆ, ಕವಿಪ.
2. ಕಾರ್ಯದರ್ಶಿ/ಅಪರ ಕಾರ್ಯದರ್ಶಿ/ಜಂಟಿ ಕಾರ್ಯದರ್ಶಿ/ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರುಗಳಿಗೆ, ಕವಿಪ.
3. ಶ್ರೀ ಕೆ.ವಿ. ಮಂಜುನಾಥ್, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ನಾಮ ನಿರ್ದೇಶಿತ ರಾಜ್ಯ ಪರಿಷತ್ ಸದಸ್ಯರು, ಕವಿಪ.
4. ರಕ್ಷಾ ಕಡತಕ್ಕೆ/ಸೂಚನಾ ಫಲಕಕ್ಕೆ/ಬಿಡಿ ಪ್ರತಿಗಳು.